# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☏ : 0816-2255650, 2273511 ಫ್ಯಾಕ್ಸ್ :0816-2270719


ಸಂಖ್ಯೆ:ತುವಿ: ಪ.ವಿ::ಪ. ಶುಲ್ಕ.:2022-23 : 1181 ದಿನಾಂಕ: 13.09.2022

## ಅಧಿಸೂಚನೆ

ವಿಷಯ : 2021-22 ನೇ ಶೈಕ್ಷಣಿಕ ಸಾಲಿನ 2022 ರ ಅಕ್ಟೋಬರ್/ನವಂಬರ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿಗಳ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ UUCMS ತಂತ್ರಾಂಶದ ಮೂಲಕ ಪ್ರಥಮ ವರ್ಷದ ದ್ವಿತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

ಉಲ್ಲೇಖ : ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 12.09.2022

*****

2021-22 ನೇ ಶೈಕ್ಷಣಿಕ ಸಾಲಿನ 2022 ರ ಅಕ್ಟೋಬರ್/ನವಂಬರ್ ಮಾಹೆಗಳಲ್ಲಿ ನಡೆಯಲಿರುವ ರಾಷ್ಟ್ರೀಯ ಶಿಕ್ಷಣ ನೀತಿಯಡಿಯಲ್ಲಿ (NEP) ಬರುವ ವಿವಿಧ ಸ್ನಾತಕ ಪದವಿಗಳಾದ ಬಿ.ಎ./ ಬಿ.ಎಸ್.ಡಬ್ಲ್ಯೂ./ ಬಿ.ಎಸ್ಸಿ./ಬಿ.ಸಿ.ಎ./ಬಿ.ಕಾಂ./ಬಿ.ಎಸ್ಸಿ. (ಫ್ಯಾಷನ್ ಡಿಸೈನಿಂಗ್)/ ಬಿ.ಬಿ.ಎ./ ಬಿ.ವಿ.ಎ. ಮತ್ತು ಸಿಬಿಸಿಎಸ್ ಅಡಿ ಬರುವ B.VOC. in HARDWARE TECHNOLOGY & NETWORKING (ನವೀನ ವಿದ್ಯಾರ್ಥಿಗಳು) ಪದವಿಗಳ ಪ್ರಥಮ ವರ್ಷದ ದ್ವಿತೀಯ ಸೆಮಿಸ್ಟರ್ ಪದವಿಗೆ UUCMS ತಂತ್ರಾಂಶದ ಮೂಲಕ ಪ್ರವೇಶ ಪಡೆದಿರುವ (ಶೈಕಣಿಕ ವಿಭಾಗದಿಂದ ಪ್ರವೇಶಾನುಮೋದನೆ ಪಡೆದಿರುವ ವಿದ್ಯಾರ್ಥಿಗಳಿಂದ) ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪ್ರಸಕ್ತ ಸಾಲಿನ ರಾಷ್ಟ್ರೀಯ ಶಿಕ್ಷಣ ನೀತಿಯ (NEP) ವಿನಿಯಮದಡಿಯಲ್ಲಿ ಸ್ನಾತಕ ಪದವಿಗಳ ದ್ವಿತೀಯ ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಮತ್ತು ಸಿಬಿಸಿಎಸ್ ನಿಯಮದಡಿಯಲ್ಲಿ ಬರುವ ಬಿ.ವೋಕ್ ವಿದ್ಯಾರ್ಥಿಗಳ (ನವೀನ) ಸಂಪೂರ್ಣ ದತ್ತಾಂಶವನ್ನು ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದ್ದು, ಸದರಿ ತಂತ್ರಾಂಶದಲ್ಲಿ ವಿಶ್ವವಿದ್ಯಾನಿಲಯದಿಂದ ಹಿಡಿದು ಕಾಲೇಜು ಪ್ರಾಂಶುಪಾಲರು, ವಿಭಾಗದ ಮುಖ್ಯಸ್ಥರು, ಉಪನ್ಯಾಸಕರು, ವಿದ್ಯಾರ್ಥಿಗಳು ಇತ್ಯಾದಿ ಹಂತಗಳವರೆಗೆ ಸೂಕ್ತ ಜವಾಬ್ದಾರಿಗಳನ್ನು ಹಂಚಿಕೆ ಮಾಡಿ ಪ್ರತ್ಯೇಕ ಲಾಗಿನ್ ವಿವರಗಳನ್ನು ಒದಗಿಸಲಾಗಿರುತ್ತದೆ. ಸದರಿ ವ್ಯವಸ್ಥೆಯಲ್ಲಿ ಈಗಾಗಲೇ ಪ್ರಥಮ ಸೆಮಿಸ್ಟರ್ ಪರೀಕ್ಷೆಯನ್ನು ಪೂರ್ಣಗೊಳಿಸಿದ್ದು, ಸದರಿ ಸಂದರ್ಭದಲ್ಲಿ ನೀಡಿದಂತೆಯೇ ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ತಮ್ಮ ಕಾಲೇಜುಗಳ ಹಂತದಲ್ಲಿ ಸೂಕ್ತ ಮಾರ್ಗದರ್ಶನ ಮತ್ತು ಸಹಾಯ ಒದಗಿಸಲು ಸೂಚಿಸಲಾಗಿದೆ.

ವಿದ್ಯಾರ್ಥಿಗಳಿಗೆ ನಿಗದಿತ ದಿನಾಂಕದೊಳಗೆ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ಆಂತರಿಕ ಅಂಕಗಳನ್ನು ಮತ್ತು ಹಾಜರಾತಿಯನ್ನು ನಮೂದಿಸುವುದು ಹಾಗೂ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು UUCMS ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸಿದ ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿ ನಮೂನೆಯನ್ನು ಪರಿಶೀಲಿಸಿ UUCMS ತಂತ್ರಾಂಶದ ಮೂಲಕ ಅಂಗೀಕರಿಸುವುದು. ವಿದ್ಯಾರ್ಥಿಗಳ ಪ್ರವೇಶಾನುಮೋದನೆ, ಪರೀಕ್ಷೆ ತೆಗೆದುಕೊಳ್ಳುವವರ ಅಂಕಿ-ಅಂಶಗಳನ್ನು ಬಾಹ್ಯವಾಗಿಯೂ ಕ್ರೂಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ 15.10.2022 ದಿನಾಂಕ ದೊಳಗೆ ಈ ಕೆಳಕಂಡ ನಮೂನೆಗಳಂತೆ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

(...2)

ನಮೂನೆ-1

ಕಾಲೇಜಿನ ಹೆಸರು:

| ಕ್ರ.ಸಂ. | ವಿದ್ಯಾರ್ಥಿಯ ಹೆಸರು | ನೋಂದಣಿ ಸಂಖ್ಯೆ | ತೆಗೆದುಕೊಂಡಿರುವ ವಿಷಯ | ಶುಲ್ಕ ಪಾವತಿಸಿದ ವಿವರ & ದಿನಾಂಕ |
|---|---|---|---|---|
| 1. | | | | |
| 2. | | | | |

ನಮೂನೆ-2

ಕಾಲೇಜಿನ ಹೆಸರು:

| ಕ್ರ.ಸಂ. | ಪತ್ರಿಕೆಯ ಹೆಸರು | ಪ್ರಶ್ನೆ ಪತ್ರಿಕೆ ಕೋಡ್ (QP Code) | ಒಟ್ಟು ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| 1. | | | |
| 2. | | | |

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ದಿನಾಂಕ | 20.09.2022 ಇಂದ 29.09.2022 |
| 2. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 03.10.2022 |
| 3. | ವಿದ್ಯಾರ್ಥಿಗಳಿಗೆ ರೂ 500/- ಗಳ ವಿಶೇಷ ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 06.10.2022 |
| 4. | ಕಾಲೇಜಿನವರು ವಿದ್ಯಾರ್ಥಿಗಳು UUCMS ಮೂಲಕ ಪಾವತಿಸಿರುವ ಪರೀಕ್ಷಾ ಶುಲ್ಕದ ವಿವರವನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 15.10.2022 |
| 5. | ಕಾಲೇಜಿನವರು UUCMS ನಲ್ಲಿ ಆಂತರಿಕ ಅಂಕಗಳನ್ನು ಹಾಗೂ ವಿದ್ಯಾರ್ಥಿಗಳ ಹಾಜರಾತಿ ಮಾಹಿತಿಗಳನ್ನು ನಮೂದಿಸಲು ಹಾಗೂ ಪ್ರಾಂಶುಪಾಲರ ಯು.ಯು.ಸಿ.ಎಂ.ಎಸ್. ಲಾಗಿನಿಂದ ಪರೀಕ್ಷಾ ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಅರ್ಜಿಯನ್ನು ಪರಿಶೀಲಿಸಿ ಅನುಮೋದಿಸಲು ಕೊನೆಯ ದಿನಾಂಕ | 07.10.2022 |
| 6. | ಪ್ರವೇಶ ಪತ್ರ (Hallticket) UUCMS ತಂತ್ರಾಂಶದ ಮೂಲಕ ಪಡೆಯಲು ದಿನಾಂಕ | 08.10.2022 ಇಂದ 14.10.2022 |
| 7. | ಪ್ರಾಯೋಗಿಕ ಪರೀಕ್ಷೆಗಳಿಗೆ ವಿದ್ಯಾರ್ಥಿಗಳ ಬ್ಯಾಚ್‌ಗಳನ್ನು ಕಾಲೇಜಿನವರು ಯು.ಯು.ಸಿ.ಎಂ.ಎಸ್.ನಲ್ಲಿ ಸಿದ್ಧಪಡಿಸುವುದು ಮತ್ತು ಸಂಬಂಧಪಟ್ಟ ಪರೀಕ್ಷಾ ಮಂಡಳಿ ಅಧ್ಯಕ್ಷರು ಯು.ಯು.ಸಿ.ಎಂ.ಎಸ್. ನಲ್ಲಿ ಬ್ಯಾಚ್‌ಗಳನ್ನು ಅನುಮೋದಿಸಿ ಪರೀಕ್ಷಕರನ್ನು ನೇಮಿಸುವುದು. | 08.10.2022 ಇಂದ 14.10.2022 |
| 8. | ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಬೇಕಾದ ದಿನಾಂಕ | 15.10.2022 ಇಂದ 25.10.2022 |
| 9. | ಸೈದ್ಧಾಂತಿಕ ಪರೀಕ್ಷೆಗಳನ್ನು ನಡೆಸುವ ದಿನಾಂಕ: | 28.10.2022 ಇಂದ |

| ಕ್ರ.ಸಂ | ಸೆಮಿಸ್ಟರ್ | ಕೋರ್ಸ್ | ಪರೀಕ್ಷಾ ಶುಲ್ಕ (ನವೀನ) |
|---|---|---|---|
| 1. | II | BA/ BSW /B.Com/BBA/ BSc/BCA/BSc(FAD)/BVA & B.Voc | ರೂ. 1,100-00 |

(...3)

ವಿ.ಸೂ.: 2021-22 ನೇ ಸಾಲಿನಲ್ಲಿ NEP ಹಾಗೂ ಸಿ.ಬಿ.ಸಿ.ಎಸ್‌ನ ಬಿ.ವೋಕ್‌ನ (ನವೀನ) ಪದವಿಗಳಿಗೆ ಯು.ಯು.ಸಿ.ಎಂ.ಎಸ್. ಮೂಲಕ ದ್ವಿತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿವರವನ್ನು ವಿಶ್ವವಿದ್ಯಾನಿಲಯಕ್ಕೆ ಹಾರ್ಡ್ ಕಾಪಿಯ ಒಂದು ಪ್ರತಿಯನ್ನು ಪರೀಕ್ಷಾ ವಿಭಾಗಕ್ಕೂ ಹಾಗೂ ಮತ್ತೊಂದು ಪ್ರತಿಯನ್ನು ಹಣಕಾಸು ವಿಭಾಗಕ್ಕೂ ಕಡ್ಡಾಯವಾಗಿ ಸಲ್ಲಿಸುವುದು.

2021-22 ನೇ ಸಾಲಿನ ಯು.ಯು.ಸಿ.ಎಂ.ಎಸ್. ತಂತ್ರಾಂಶದ ಮೂಲಕ ದ್ವಿತೀಯ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸುವಂತೆ ಹಾಗೂ ಸದರಿಯವರು ವ್ಯಾಸಂಗ ಮಾಡುತ್ತಿರುವ ಅನುಮೋದಿತ ಪತ್ರಿಕೆ/ವಿಷಯಗಳ ವಿವರಗಳನ್ನು ಸರಿಯಾಗಿ ಪರಿಶೀಲಿಸುವಂತೆ ತಿಳಿಸಿ ಸೂಚನಾ ಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ಪರೀಕ್ಷಾ ಶುಲ್ಕದಲ್ಲಿ ರಿಯಾಯಿತಿ ಪಡೆದಿರುವ ಹಾಗೂ ಪಡೆಯದಿರುವ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಇತರೆ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸುವುದು. (ಅನ್ವಯಿಸುವ ಶುಲ್ಕಗಳು ಮಾತ್ರ)

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ( ಪ್ರತಿ ಸೆಮಿಸ್ಟರ್‌ಗೆ) | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00* |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00* |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) ( ಪ್ರತಿ ಸೆಮಿಸ್ಟರ್‌ಗೆ) | 35-00* |

* UUCMS ತಂತ್ರಾಂಶದಲ್ಲಿ ಅರ್ಜಿ ಪರಿಶೀಲನಾ ಶುಲ್ಕದಡಿಯಲ್ಲಿ ಒಟ್ಟು ರೂ. 70.00 ಗಳೆಂದು ನಮೂದಿಸಲಾಗಿದೆ. ಇದನ್ನು ಆನ್‌ಲೈನ್ ಅರ್ಜಿ ಶುಲ್ಕ ರೂ. 25-00 + ಅರ್ಜಿ ಪರಿಶೀಲನಾ ಶುಲ್ಕ ರೂ. 10-00 + ಪರೀಕ್ಷಾ ಸಿದ್ಧತಾ ಶುಲ್ಕ ರೂ. 35-00 ಎಂದು ಅರ್ಥೈಸಿಕೊಳ್ಳುವುದು.

**ಪರೀಕ್ಷಾ ಕೇಂದ್ರ ಹೊಂದಿರುವ ಕಾಲೇಜಿನವರು ತಮ್ಮ ಕೇಂದ್ರದಲ್ಲಿ ಪರೀಕ್ಷೆ ನಡೆಯುವ ಒಟ್ಟು ದಿನಗಳಲ್ಲಿ ಒಂದು ದಿನದ ಗರಿಷ್ಠ ವಿದ್ಯಾರ್ಥಿಗಳ ಸಂಖ್ಯೆಯನ್ನು ನಮೂದಿಸಿ ಪ್ರತಿ ವಿದ್ಯಾರ್ಥಿಗೆ ರೂ. 6-00 ಗಳಂತೆ ಪ್ರತ್ಯೇಕ ಬಿಲ್ಲನ್ನು ಸಿದ್ಧಪಡಿಸಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವುದು.

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ:

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ ಮಿತಿ ರೂ. 2.50 ಲಕ್ಷದೊಳಗಿದ್ದು, ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ್ದರೆ ಅಂತಹ ನವೀನ ಮತ್ತು ಪೂರಕ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ವಿನಾಯಿತಿಗೆ ಅರ್ಹರಾಗಿರುತ್ತಾರೆ. ಆದರೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿನಾಯಿತಿಗೆ ಸಂಬಂಧಿಸಿದಂತೆ (ಸರ್ಕಾರದ ಪತ್ರ ಸಂಖ್ಯೆ:ಸಕನಿ/ವಿ.ವೇ.ಕೋಶ/ಸಿಆರ್:03/2021-22 ಬೆಂಗಳೂರು, ದಿನಾಂಕ:04.05.2022) ಲಗತ್ತಿಸಲಾದ ಪತ್ರದನ್ವಯ ವಿದ್ಯಾರ್ಥಿಯು ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಜಮೆಯಾದ ಏಳು ದಿನಗಳೊಳಗಾಗಿ ವಿದ್ಯಾರ್ಥಿಯು ಕಾಲೇಜಿಗೆ ಶುಲ್ಕ ಪಾವತಿ ಮಾಡಬೇಕೆಂಬ ಷರತ್ತಿಗೊಳಪಡಿಸಿ ಶುಲ್ಕ ವಿನಾಯಿತಿ ನೀಡಬಹುದಾಗಿದೆ.

ಉಳಿದ ಎಲ್ಲಾ ವರ್ಗಗಳ ನವೀನ & ಪೂರಕ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ (ಸೆಮಿಸ್ಟರ್‌ವಾರು) ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು.

ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.

ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

(...4)

ವಿಶ್ವವಿದ್ಯಾನಿಲಯದಿಂದ ದ್ವಿತೀಯ ಸೆಮಿಸ್ಟರ್‌ನಲ್ಲಿ ಪ್ರವೇಶಾನುಮೋದನೆ ಪಡೆದ ಎಲ್ಲಾ ಅರ್ಹ ವಿದ್ಯಾರ್ಥಿಗಳು ತಮ್ಮ ಲಾಗಿನ್ ಮೂಲಕ ಪರೀಕ್ಷಾ ಶುಲ್ಕವನ್ನು UUCMS ತಂತ್ರಾಂಶದ ಮೂಲಕ ನಿಗದಿತ ದಿನಾಂಕದೊಳಗೆ ಪಾವತಿಸುವುದು. **ಕಾಲೇಜಿನವರು ಪರೀಕ್ಷಾ ಶುಲ್ಕ ಪಾವತಿಸಿರುವ ಪಟ್ಟಿಯನ್ನು ದ್ವಿ-ಪ್ರತಿಗಳಲ್ಲಿ ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು.**

ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳಿಗಿಂತ ಮೊದಲು UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿ ಅಧ್ಯಕ್ಷರುಗಳಿಂದ ಅನುಮೋದನೆ ಪಡೆದುಕೊಂಡು UUCMS ತಂತ್ರಾಂಶದಲ್ಲಿ ನಮೂದಿಸುವುದು ಮತ್ತು ಪರೀಕ್ಷಾ ಅಧೀಕ್ಷಕರು/ಪ್ರಾಂಶುಪಾಲರುಗಳು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು.

ಸೈದ್ಧಾಂತಿಕ (Theory) ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

**<u>ಆಂತರಿಕ ಅಂಕಗಳನ್ನು ಸಲ್ಲಿಸುವ ಕುರಿತು ಸೂಚನೆಗಳು:</u>**

1. ಸೈದ್ಧಾಂತಿಕ (Theory) ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ UUCMS ತಂತ್ರಾಂಶದಲ್ಲಿ ನಿಗಧಿಪಡಿಸಲಾದ ದಿನಾಂಕದೊಳಗೆ ಆಂತರಿಕ ಅಂಕಗಳನ್ನು ಮತ್ತು ವಿದ್ಯಾರ್ಥಿಗಳ ಹಾಜರಾತಿ ವಿವರಗಳನ್ನು ಕಾಲೇಜಿನವರು ನಮೂದಿಸುವುದು ಹಾಗೂ ಪರಿಶೀಲಿಸಿ ಅನುಮೋದಿಸುವುದು. ಹಾಗೂ ಪಟ್ಟಿಯನ್ನು (Hard copy) ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರ ಹೆಸರಿಗೆ ಪರೀಕ್ಷಾಂಗ ವಿಭಾಗದ ಟಪಾಲ್(Despatch) ನಲ್ಲಿ ಸಲ್ಲಿಸುವುದು.
2. ಆಂತರಿಕ ಅಂಕಗಳನ್ನು UUCMS ತಂತ್ರಾಂಶದಲ್ಲಿ ನಮೂದಿಸುವ ಮುನ್ನ ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು ಸರಿಯಾಗಿ ಪರಿಶೀಲಿಸಿ ನಮೂದಿಸಿದ ನಂತರ ಪ್ರಾಂಶುಪಾಲರು ಮತ್ತೊಮ್ಮೆ ಪರಿಶೀಲಿಸಿ ದೃಢೀಕರಿಸಿ ಸಲ್ಲಿಸುವುದು. ಸಲ್ಲಿಸುವಾಗ ವಿಳಂಬವಾದಲ್ಲಿ / ಸರಿಯಾಗಿ ನೀಡದಿದ್ದಲ್ಲಿ **ದಿನವೊಂದಕ್ಕೆ ರೂ. 1,000/- ಗಳಂತೆ ಗರಿಷ್ಠ ರೂ. 10,000-00 (ಹತ್ತು ಸಾವಿರ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.**

1. ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರ ಜವಾಬ್ದಾರಿಯಾಗಿದ್ದು, ಯಾವುದೇ ರೀತಿಯ ತಪ್ಪುಗಳಾಗದಂತೆ ಎಚ್ಚರಿಕೆ ವಹಿಸುವುದು.
2. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ.

**ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.**

13/9/22

ಕುಲಸಚಿವರು(ಪರೀಕ್ಷಾಂಗ)

**ಗೆ, ಪ್ರಾಂಶುಪಾಲರು, ಘಟಕ / ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಅಧ್ಯಕ್ಷರು, ಎಲ್ಲಾ ಸ್ನಾತಕ ವಿಷಯಗಳ ಪರೀಕ್ಷಾ ಮಂಡಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ವಿಶ್ವವಿದ್ಯಾನಿಲಯದ ಅಂತರ್ಜಾಲ (Website) ದಲ್ಲಿ ಇಂದೇ ಪ್ರಕಟಿಸುವುದು.
9. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. 10. ಕಛೇರಿ ಪ್ರತಿ.